# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಬಿ. ಕೆ. ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1121 |
| ಉತ್ತರಿಸಬೇಕಾದ ಸಚಿವರು | : | ಕೃಷಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 23-02-2024 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕಾ ವಿಜ್ಞಾನಗಳ ವಿಶ್ವವಿದ್ಯಾಲಯ ಇರುವಕ್ಕಿ, ಶಿವಮೊಗ್ಗ ಇದರ ಅಧೀನದಲ್ಲಿರುವ ವಲಯ ಕೃಷಿ ಮತ್ತು ತೋಟಗಾರಿಕಾ ಸಂಶೋಧನಾ ಕೇಂದ್ರ, ಬ್ರಹ್ಮಾವರದ 350 ಎಕರೆ ಕೃಷಿ ಆವರಣದಲ್ಲಿ ಆಧುನಿಕ ವ್ಯವಸ್ಥೆಯುಳ್ಳ ಡಿಪ್ಲೋಮಾ ಕೃಷಿ ಮಹಾವಿದ್ಯಾಲಯವನ್ನು ಯಾವಾಗ ಪ್ರಾರಂಭ ಮಾಡಲಾಯಿತು; | ವಲಯ ಕೃಷಿ ಮತ್ತು ತೋಟಗಾರಿಕಾ ಸಂಶೋಧನಾ ಕೇಂದ್ರ, ಬ್ರಹ್ಮಾವರದಲ್ಲಿ ಡಿಪ್ಲೋಮಾ ಕೃಷಿ ಕಾಲೇಜನ್ನು 2014ನೇ ಸಾಲಿನಿಂದ ಪ್ರಾರಂಭ ಮಾಡಲಾಗಿದೆ. |
| ಆ) | ಡಿಪ್ಲೋಮಾ ಕಾಲೇಜು ಕಟ್ಟಡ ನಿರ್ಮಾಣಕ್ಕೆ ನಬಾರ್ಡ್ ಸಂಸ್ಥೆಯಿಂದ ರೂ.5ಕೋಟಿ ವ್ಯಯಿಸಲಾಗಿರುವುದು ಹಾಗೂ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗೆ ಹೈಟೆಕ್ ತಂತ್ರಜ್ಞಾನವನ್ನು ಒಳಗೊಂಡಿರುವ ತರಗತಿ ಕೊಠಡಿ, ಪ್ರಯೋಗಾಲಯ, ಗ್ರಂಥಾಲಯ, ಗಣಕಯಂತ್ರದ ಕೊಠಡಿಗಳನ್ನು ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಇ) | ಸದರಿ ಕೃಷಿ ಡಿಪ್ಲೋಮಾ ಕಾಲೇಜು 2023-24ನೇ ಸಾಲಿನಿಂದ ನೂತನ ರಾಷ್ಟ್ರೀಯ ಶಿಕ್ಷಣ ನೀತಿಯ ಮಾರ್ಗಸೂಚಿಯಂತೆ ಸ್ಥಗಿತಗೊಳಿಸಲಾಗಿದ್ದು, ಮುಂದಿನ ಶೈಕ್ಷಣಿಕ ವರ್ಷದಲ್ಲಿ ಇದೇ ಕಟ್ಟಡದಲ್ಲಿ ಕೃಷಿ ಕಾಲೇಜನ್ನು ಪ್ರಾರಂಭಿಸುವ ಯೋಜನೆ ಅಥವಾ ಡಿಪ್ಲೋಮಾ ಕೃಷಿ ಕಾಲೇಜನ್ನು ಪುನಾರಂಭಿಸುವ ಯೋಜನೆ ಸರ್ಕಾರದ ಮುಂದಿದೆಯೇ; ಇಲ್ಲವಾದಲ್ಲಿ ಸರ್ಕಾರದ ನೀತಿಯಿಂದಾಗಿ ರೈತರ ಮಕ್ಕಳಿಗೆ ಅನ್ಯಾಯವಾಗದಂತೆ ಸರ್ಕಾರ ಕ್ರಮ ವಹಿಸುವುದು? | ನೂತನ ಕೃಷಿ ಕಾಲೇಜುಗಳನ್ನು ಪ್ರಾರಂಭಿಸುವ ಪ್ರಸ್ತಾವನೆಗಳನ್ನು ಪರಿಶೀಲಿಸುವ ಸಂಬಂಧ ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ ಇವರ ಅಧ್ಯಕ್ಷತೆಯಲ್ಲಿ ಪರಿಣಿತ ಸಮಿತಿಯನ್ನು (Expert Committee) ರಚಿಸಲಾಗಿದ್ದು, ಈ ಸಮಿತಿಯು ರಾಜ್ಯದಲ್ಲಿರುವ ಕೃಷಿ ವಿಶ್ವವಿದ್ಯಾಲಯಗಳ ಬಲವರ್ಧನೆ/ ಹೊಸ ಕೃಷಿ ಕಾಲೇಜುಗಳ ಸ್ಥಾಪನೆ ಮತ್ತು ಅವುಗಳ ಇನ್ನಿತರ ಅಭಿವೃದ್ಧಿಗೆ ಅಗತ್ಯವಿರುವ ಅಂಶಗಳನ್ನು ಪರಿಶೀಲಿಸುತ್ತದೆ. ರಾಜ್ಯದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳಲ್ಲಿ ಹೊಸ ಕೃಷಿ ಕಾಲೇಜುಗಳನ್ನು ಸ್ಥಾಪಿಸುವಂತಹ ಪ್ರಸ್ತಾವನೆಗಳನ್ನು ಈ ಸಮಿತಿಯ ಮುಂದೆ ಸಲ್ಲಿಸಬೇಕಾಗಿರುತ್ತದೆ.<br><br>ಈ ಸಮಿತಿಯು ನೂತನ ಕಾಲೇಜುಗಳನ್ನು ಆರಂಭಿಸುವುದಕ್ಕೂ ಮೊದಲು ಪ್ರಸ್ತುತ ಚಾಲ್ತಿಯಲ್ಲಿರುವ |

| | | |
|---|---|---|
| | | ಕಾಲೇಜುಗಳನ್ನು ಬಲಪಡಿಸುವಂತೆ/ಉನ್ನತೀಕರಿಸುವಂತೆ ಹಾಗೂ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳಿಗೆ ಆರ್ಥಿಕ ಹೊರೆ ಹಾಗೂ ಡಿಪ್ಲೋಮಾ ಕೋರ್ಸಿನ ಬೋಧಕರು ಕಡಿಮೆಯಿರುವುದರಿಂದ, ಡಿಪ್ಲೋಮಾ ಕಾಲೇಜುಗಳನ್ನು ಸ್ಥಗಿತಗೊಳಿಸಲು ನಿರ್ಣಯಿಸಲಾಗಿರುತ್ತದೆ.<br><br>ಈ ಹಿನ್ನೆಲೆಯಲ್ಲಿ ಸದ್ಯಕ್ಕೆ ಇದೇ ಕಟ್ಟಡದಲ್ಲಿ ಕೃಷಿ ಕಾಲೇಜನ್ನು ಪ್ರಾರಂಭಿಸುವ ಅಥವಾ ಡಿಪ್ಲೋಮಾ ಕೃಷಿ ಕಾಲೇಜನ್ನು ಪುನಾರಂಭಿಸುವ ಪ್ರಸ್ತಾವನೆಯನ್ನು ಪರಿಗಣಿಸಲು ಸಾಧ್ಯವಿರುವುದಿಲ್ಲ. |

ಇ-ಸಂಖ್ಯೆ: AGRI 7 AUS 2024

24/2

(ಎನ್. ಚೆಲುವರಾಯಸ್ವಾಮಿ)
ಕೃಷಿ ಸಚಿವರು